ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 1986 (2384)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ಸರ್ಕಾರಿ ಪದವಿ ಪೂರ್ವ ಉಪನ್ಯಾಸಕರ ನೇಮಕಾತಿ ವೃಂದಗಳ ಬಗ್ಗೆ

(ಅ) ಸರ್ಕಾರಿ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಮತ್ತು ನೇಮಕಾತಿ ವೃಂದಗಳ ನಿಯಾಮಾವಳಿಯ ಪ್ರಕಾರ ಶೇ 50 ನೇರ ನೇಮಕಾತಿ ಮತ್ತು ಶೇ 50 ರಷ್ಟು ಸ್ನಾತಕೋತ್ತರ ಪದವಿ ಪಡೆದ ಪ್ರೌಢಶಾಲಾ ಸಹ ಶಿಕ್ಷಕರರಿಂದ ಬಡ್ತಿ ಮೂಲಕ 2014ರವರೆಗೆ ನಿಯಮಾನುಸಾರ ನೇಮಕಾತಿ ಮಾಡಲಾಗಿದೆಯೇ;

(ಆ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಜ್ಯೇಷ್ಠತಾ ಪಟ್ಟಿ ತಯಾರಿಸುವಾಗ ಕರ್ನಾಟಕ ರಾಜ್ಯ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ : ಸಿಆಸುಇ 43 ಸೇಕನಿ 87 ದಿನಾಂಕ : 14-12-1987 ರ ಆದೇಶವನ್ನು ಮತ್ತು ಕರ್ನಾಟಕ ಆಡಳಿತ ನ್ಯಾಯ ಮಂಡಳಿ ಅರ್ಜಿ ಸಂಖ್ಯೆ : 3738-3756/2009 ದಿನಾಂಕ:27-09-2010ರ ತೀರ್ಪನ್ನು ಪಾಲಿಸಲಾಗಿದೆಯೇ;
(ಇ) ಹಲವಾರು ವರ್ಷಗಳಿಂದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಜ್ಯೇಷ್ಠತಾ ಪಟ್ಟಿಯಲ್ಲಿ ನ್ಯೂನತೆಗಳು ಇದುದ್ದರಿಂದ ಹಲವು ಉಪನ್ಯಾಸಕರು, ಬಡ್ತಿಯಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಜ್ಯೇಷ್ಠತಾ ಪಟ್ಟಿಯನ್ನು ನಿಯಾಮಾನುಸಾರ ಲೋಪದೋಷಗಳಿಲ್ಲದೇ ಸಿದ್ಧಪಡಿಸಲು ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಯಾವ ಕಾಲಮಿತಿಯೊಳಗೆ ನೀಡಲಾಗುವುದು ? (ಮಾಹಿತಿ ನೀಡುವುದು)